ರಾಜೀವ್ ಗಾಂಧಿ ಗ್ರಾಮೀಣ ವಸತಿ ಯೋಜನೆ

2480(3013); ಶ್ರೀ ಗುರು ಪಾಟೀಲ ಶಿರವಾಳ

ಅ) ರಾಜೀವ್ ಗಾಂಧಿ ಗ್ರಾಮೀಣ ವಸತಿ ಯೋಜನೆಯಡಿಯ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಲೋಪದೋಷಗಳಿಂದಾಗಿ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡುತ್ತಿರುವಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಯೋಜನೆಯಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳೇನು;

ಇ) ಪ್ರಸ್ತುತ ಅನುಸರಿಸುತ್ತಿರುವ ಆಯ್ಕೆ ಪ್ರಕ್ರಿಯೆಯನ್ನು ಬದಲಾವಣೆ ಮಾಡಲು ಸರ್ಕಾರ ಉದ್ದೇಶಿಸಿದೆಯೇ (ಮಾಹಿತಿ ನೀಡುವುದು)?

ಡಾ॥ ಎಂ.ಹೆಚ್. ಅಂಬರೀಷ್ (ವಸತಿ ಸಚಿವರು)

ಅ) ಇಲ್ಲ.

ಆ) ವಸತಿ ಯೋಜನೆಗಳಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳನ್ನು ಈ ಕೆಳಗೆ ವಿವರಿಸಲಾಗಿದೆ.

ಗ್ರಾಮೀಣ ವಸತಿ ಯೋಜನೆಗಳು:

ಗ್ರಾಮೀಣ ವಸತಿ ಯೋಜನೆಗಳಾದ ಬಸವ ವಸತಿ, ಗ್ರಾಮೀಣ ಅಂಬೇಡ್ಕರ್ ಹಾಗೂ ಇಂದಿರಾ ಆವಾಸ್ ಯೋಜನೆಯಡಿ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಿ ಫಲಾನುಭವಿಗಳನ್ನು ಆಯ್ಕೆಗೊಳಿಸಲಾಗುತ್ತದೆ.

- ಅರ್ಜಿದಾರರು ಕಡ್ಡಾಯವಾಗಿ ಮಹಿಳೆಯಾಗಿರಬೇಕು (ವಿವಾಹಿತ ಅಥವಾ ಏಕ ಮಹಿಳಾ ಒಡೆತನದ ಗೃಹಿಣಿ) ಮಾಜಿ ಯೋಧರು ವಿಧುರರು, ಅಂಗವಿಕಲರು, ಹಿರಿಯನಾಗರಿಕರಾಗಿದ್ದಲ್ಲಿ ಪುರುಷರು ಸಹ ಅರ್ಹರಾಗಿರುತ್ತಾರೆ.

- ಅರ್ಜಿದಾರರು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದಿದ್ದು ವಾರ್ಷಿಕ ಆದಾಯವು ರೂ. 32,000/– ಕ್ಕಿಂತ ಕಡಿಮೆ ಇರಬೇಕು.
- ಅರ್ಜಿದಾರರು ವಸತಿ ರಹಿತ ಅಥವಾ ಗುಡಿಸಲುವಾಸಿಯಾಗಿ ರಾಜ್ಯದ ಯಾವುದೇ ಭಾಗದಲ್ಲಿ ಸ್ವಂತ ಮನೆಯನ್ನು ಹೊಂದಿರಬಾರದು.
- ಅರ್ಜಿದಾರರು ಸ್ವಂತ ನಿವೇಶನ ಹೊಂದಿದ್ದು ನಿವೇಶನಕ್ಕೆ ಸಂಬಂಧಿಸಿದಂತೆ ಖಾತೆ ಹೊಂದಿರಬೇಕು ಹಾಗೂ ಇನ್ನಿತರೆ ಯೋಜನೆ/ ಇಲಾಖೆಯಿಂದ ವಸತಿ ಸೌಲಭ್ಯ ಪಡೆದಿರಬಾರದು.
- ಇಂದಿರಾ ಆವಾಸ್ ಯೋಜನೆಯಡಿ ವಸತಿ ಸೌಲಭ್ಯ ಪಡೆಯಲು ಸರ್ವ ಕುಟುಂಬ ಸಮೀಕ್ಷೆ ಅಡಿ 30 ಅಥವಾ 30 ಅಂಕಗಳಿಗಿಂತ ಕಡಿಮೆ ಇರಬೇಕು,

ಮೇಲಿನ ಮಾನದಂಡಗಳನ್ನು ಅನುಸರಿಸಿ ಅರ್ಹ ಫಲಾನುಭವಿಗಳನ್ನು ಗ್ರಾಮ ಸಭೆಗಳಲ್ಲಿ ಗುರುತಿಸಿ, ವಸತಿ ರಹಿತರನ್ನು ಸರ್ಕಾರವು ನಿಗದಿಪಡಿಸಿರುವ ಗುರಿಗೆ ಅನುಗುಣವಾಗಿ ಆಯ್ಕೆ ಮಾಡಲಾಗುವುದು. ನಂತರ ಸದರಿ ಫಲಾನುಭವಿಗಳ ಪಟ್ಟಿಯನ್ನು ಆಯಾ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುವ ಶಾಸಕರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಜಾಗೃತ ಸಮಿತಿಯಲ್ಲಿ ಅನುಮೋದಿಸಿ ಅರ್ಹ ವಸತಿ ರಹಿತರನ್ನು ಆಯ್ಕೆಗೊಳಿಸಲು ಅವಕಾಶ ಕಲ್ಪಿಸಲಾಗಿದೆ.

ನಗರ ವಸತಿ ಯೋಜನೆ:

ನಗರ ಪ್ರದೇಶದಲ್ಲಿ, ವಾಜಪೇಯಿ ವಸತಿ ಯೋಜನೆಯಡಿ ಈ ಕೆಳಕಂಡ ಮಾನ ದಂಡಗಳನ್ನು ಅನುಸರಿಸಲಾಗುತ್ತಿದೆ.

- ಅರ್ಜಿದಾರರು ಮಹಿಳಾ ಮತ್ತು ಪುರುಷ ಫಲಾನುಭವಿಗಳು ವಸತಿ ಪಡೆಯಲು ಅರ್ಹರಾಗಿರುತ್ತಾರೆ.

- ಅರ್ಜಿದಾರರು ಅರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದಿದ್ದು ಮಾಸಿಕ ಆದಾಯವು ರೂ. 7300/– ಕ್ಕಿಂತ ಕಡಿಮೆ ಇರಬೇಕು. (ವಾರ್ಷಿಕ ರೂ. 87600/– ಗಳು)
- ಅರ್ಜಿದಾರರು ವಸತಿ ರಹಿತ ಅಥವಾ ಗುಡಿಸಲುವಾಸಿಯಾಗಿ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿ ಸ್ವಂತ ಮನೆಯನ್ನು ಹೊಂದಿರಬಾರದು.
- ಅರ್ಜಿದಾರರು ಸ್ವಂತ ನಿವೇಶನ ಹೊಂದಿದ್ದು ನಿವೇಶನಕ್ಕೆ ಸಂಬಂಧಿಸಿದಂತೆ ಖಾತೆ ಹೊಂದಿರಬೇಕು ಹಾಗೂ ಇನ್ನಿತರೆ ಯೋಜನೆ/ ಇಲಾಖೆಯಿಂದ ವಸತಿ ಸೌಲಭ್ಯ ಪಡೆದಿರಬಾರದು.

ಮೇಲಿನ ಮಾನದಂಡಗಳನ್ನು ಅನುಸರಿಸಿ ನಗರ ಪ್ರದೇಶಗಳಲ್ಲಿ ಅನುಷ್ಠಾನಗೊಳ್ಳುತ್ತಿರುವ ವಿವಿಧ ವಸತಿ ಯೋಜನೆಗಳಡಿಯಲ್ಲಿ ಅರ್ಹ ಫಲಾನುಭವಿಗಳನ್ನು ಸರ್ಕಾರವು ನಿಗದಿಪಡಿಸಿರುವ ಗುರಿಗೆ ಅನುಗುಣವಾಗಿ ಆಯಾ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುವ ಶಾಸಕರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ನಗರ ಆಶ್ರಯ ಸಮಿತಿಯಲ್ಲಿ ಆಯ್ಕೆ ಮಾಡಲಾಗುವುದು.

ಇ) ಇಲ್ಲ.

ಕೊಳಚೆ ಅಭಿವೃದ್ಧಿ ಮಂಡಳಿಯಿಂದ ನಿರ್ಮಿಸಲಾಗುತ್ತಿರುವ ಮನೆಗಳು

2481(3014); ಶ್ರೀ ಗುರು ಪಾಟೀಲ್ ಶಿರವಾಳ

ಅ) ಯಾದಗೀರ್ ಜಿಲ್ಲೆಯ ಶಹಾಪೂರ ನಗರಸಭೆ ವ್ಯಾಪ್ತಿಯಲ್ಲಿ ಕೊಳಚೆ ಅಭಿವೃದ್ಧಿ ಮಂಡಳಿಯಿಂದ 207 ಮನೆಗಳನ್ನು ನಿರ್ಮಿಸಲಾಗುತ್ತಿರುವುದು ನಿಜವಲ್ಲವೇ;

ಆ) ಹಾಗಿದ್ದಲ್ಲಿ, ಸದರಿ ಮನೆಗಳ ಹಂಚಿಕೆಯಲ್ಲಿ ಫಲಾನುಭವಿಗಳ ಆಯ್ಕೆ ಪಟ್ಟಿಯು ಯಾವ ಹಂತದಲ್ಲಿದೆ;

ಇ) ಫಲಾನುಭವಿಗಳ ಆಯ್ಕೆಯಲ್ಲಿ ಅನುಸರಿಸುತ್ತಿರುವ ಮಾನದಂಡಗಳೇನು;